**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ**

**ಸೆಷನ್ಸ್ ಕೇಸ್ ನಂಃ 26/2017 ಫ್ರಾ.ಸಾ. 14**

**ಬಾ.ಸಾ. 16**

ಸಾಕ್ಷಿದಾರರ ಹೆಸರು - ಸಂಜೀವ ಅಮೀನ್
ತಂದೆಯ ಹೆಸರು - ರಾಜ ಪೂಜಾರಿ
ವಯಸ್ಸು - 62 ವರ್ಷ
ಉದ್ಯೋಗ - ವ್ಯಾಪಾರ
ವಿಳಾಸ - ಮೂಡುಬೆಳ್ಳೆ

ದಿನಾಂಕಃ 20-09-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ**

ನಾನು ಮೂಡುಬೆಳ್ಳೆಯಲ್ಲಿ ಕಳೆದ 25 ವರ್ಷಗಳಿಂದ ದಿನಸಿ ಅಂಗಡಿಯನ್ನು ನಡೆಸಿಕೊಂಡು ಇದ್ದೇನೆ. ನಮ್ಮ ಅಂಗಡಿಯಲ್ಲಿ ಎಲ್ಲಾ ವಸ್ತುಗಳು ಸಿಗುತ್ತದೆ. 2 ನೇ ಆರೋಪಿಯ ಪರಿಚಯ ಇಲ್ಲ. ಅವರು ನಮ್ಮ ಅಂಗಡಿಗೆ ಬಂದು, ಯಾವುದೇ ಸ್ವತ್ತನ್ನು ಖರೀದಿರುವುದಿಲ್ಲ. ಸುಮಾರು 6 ವರ್ಷಗಳ ಹಿಂದೆ ಹಿರಿಯಡ್ಕ ಪೊಲೀಸರು ಬಂದು, ಒಂದು ದಾಖಲೆಗೆ ಸಹಿಯನ್ನು ಪಡೆದಿರುತ್ತಾರೆ. ದಾಖಲೆಯಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಸಾಕ್ಷಿಯು ದಾಖಲೆಯಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರು, ಅದನ್ನು ನಿಪಿ 35 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ 35(ಎ) ಎಂದು ಗುರುತಿಸಲಾಯಿತು. ಷದ್ರಿ ದಾಖಲೆಯು ಸ್ಥಳ ಪಂಚನಾಮೆಯಾಗಿರುತ್ತದೆ.

ಈ ಪ್ರಕರಣದಲ್ಲಿ ಪೊಲೀಸರು ವಿಚಾರಿಸಿರುವುದಿಲ್ಲ. ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಗೆ ಬಾವಚಿತ್ರವನ್ನು ತೋರಿಸಲಾಗಿ, ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದರು. ಆದ್ದರಿಂದ ಬಾವಚಿತ್ರವನ್ನು ನಿಪಿ 36 ಎಂದು ಗುರುತಿಸಲಾಯಿತು.

**( ಈ ಹಂತದಲ್ಲಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯು ಪಾಟಿ ಸವಾಲಿನಲ್ಲಿ ಮುಖ್ಯ ವಿಚಾರಣೆಯಲ್ಲಿ ಹೇಳಿದ ಸಾಕ್ಷ್ಯಕ್ಕೆ ವಿರುದ್ಧವಾಗಿ ಸಾಕ್ಷಿ ನೀಡಿದ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟಿ ಸವಾಲುಃ ಸರಕಾರಿ ಅಭಿಯೋಜಕರಿಂದ</u>**

ದಿನಾಂಕ 02-12-2016 ರಂದು ಬೆಳಿಗ್ಗೆ 11.30 ಗಂಟೆಯ ಸಮಯದಲ್ಲಿ 2 ನೇ ಅರೋಪಿ ನನ್ನ ಅಂಗಡಿಗೆ ಬಂದು, ರೂಪಾಯಿ 75 ಕೊಟ್ಟು ಒಂದು ಬೀಗ ವನ್ನು ಖರೀದಿಸಿಕೊಂಡು ಹೋಗಿದ್ದು, ನಂತರ ದಿನಾಂಕ 13-01-2017 ರಂದು ನಾನು ಅಂಗಡಿಯಲ್ಲಿ ವ್ಯಾಪಾರ ಮಾಡುತ್ತಿದ್ದಾಗ ಎರಡನೇ ಅರೋಪಿ ಪೊಲೀಸರನ್ನು ನನ್ನ ಅಂಗಡಿಗೆ ಕರೆದುಕೊಂಡು ಬಂದು, ಇದೇ ಅಂಗಡಿಯಿಂದ ಬೀಗವನ್ನು ಖರೀದಿಸಿರುವುದಾಗಿ ತಿಳಿಸಿದ್ದು, ನಂತರ ಪೊಲೀಸರು ನನ್ನ ಹಾಗೂ ಪಂಚರ ಸಮಕ್ಷಮದಲ್ಲಿ ಸದ್ರಿ ಅಂಗಡಿಯನ್ನು ಪರೀಶೀಲಿಸಿ ನಿಪಿ 35 ರಂತೆ ಪಂಚನಾಮೆಯನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ವಿಚಾರ ತಿಳಿಯಲಾಗಿ 2 ನೇ ಆರೋಪಿತನು ಇತರ ಆರೋಪಿಗಳ ಜೊತೆಗೆ ಸೇರಿ ಕೊಲೆ ಕೃತ್ಯ ಮಾಡಿರುತ್ತಾನೆ ಎಂದು ಗೊತ್ತಾಯಿತು ಎಂದರೆ ಸರಿಯಲ್ಲ.

ಅದೇ ರೀತಿ ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯನ್ನು ಓದಿ ಹೇಳಲಾಗಿ, ತಾನು ಆ ರೀತಿ ಹೇಳಿಕೆಯನ್ನು ನೀಡಿಲ್ಲ ಎಂದು ನುಡಿದಿರುತ್ತಾರೆ. ಆದ್ದರಿಂದ ಹೇಳಿಕೆಯನ್ನು ನಿಪಿ 37 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>2 ನೇ ಆರೋಪಿತ ಪರವಾಗಿ ಪಾಟೀ ಸವಾಲುಃ ಶ್ರೀ ಆರ್ ಪಿ ವಕೀಲರಿಂದ ಃ</u>**

ನನ್ನ ಅಂಗಡಿ ತರಕಾರಿ ಅಂಗಡಿ ಯಾಗಿರುತ್ತದೆ. ಬಾವಚಿತ್ರವನ್ನು ಯಾರು ಯಾವಾಗ ಯಾವ ಉದ್ದೇಶಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ನಿಪಿ 36 ನಮ್ಮ ಅಂಗಡಿಗೆ ಸಂಬಂಧಪಟ್ಟಿಲ್ಲ ಎಂದರೆ ಸರಿಯಲ್ಲ.

**<u>ಪಾಟೀ ಸವಾ ಉಳಿದ ಆರೋಪಿತ ಪರವಾಗಿ ಃ</u>**

ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ. C/C